ಓ.ಎಸ್.ನಂ.251/2017

ಪಿ.ಡಬ್ಲ್ಯು:1

**ದಿನಾಂಕ:14.09.2021 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಂದುವರಿದ ಪಾಟೀ ಸವಾಲು: ಪ್ರತಿವಾದಿ ಪರ ಶ್ರೀ.ಡಿ.ಸಿ. ವಕೀಲರಿಂದ:**

ನನ್ನ ಗಂಡ ಲಕ್ಷ್ಮಣ ಅವರು ಅಂತರಘಟ್ಟೆ ಮತ್ತು ಬೇಟೆದೇವ ದೇವಸ್ಥಾನದ ಸಮೀಪ ಇರುವ ನಮ್ಮ ಮನೆಯಲ್ಲಿ ಮೃತಪಟ್ಟಿರುತ್ತಾರೆ ಅಂದರೆ ಸರಿ, ಸಾಕ್ಷಿ ಮುಂದುವರಿದು ಸರಿಯಲ್ಲ ಎಂದು ನುಡಿಯುತ್ತಾರೆ. ನನ್ನ ಗಂಡ 2000-2001 ನೇ ಸಾಲಿನಲ್ಲಿ ಮೃತಪಟ್ಟಿರುತ್ತಾರೆ ಅಂದರೆ ಸರಿ. ದಾವಾ ಆಸ್ತಿ ನಿವೇಶನ ಆಗಿದ್ದಾಗ ನಾನು ಮತ್ತು ನನ್ನ ಗಂಡ ಪ್ರತಿವಾದಿ ಗಂಡ ಷರೀಫ್ ರವರಿಗೆ ಮಾರಾಟ ಮಾಡಿರುತ್ತೇವೆ ಅಂದರೆ ಸರಿಯಲ್ಲ. ಪ್ರತಿವಾದಿಯು ನಾನು ದಾವೆಯಲ್ಲಿ ಕೋರಿರುವಂತೆ ಯಾವುದೇ ಬಾಡಿಗೆಯನ್ನು ಪಾವತಿ ಮಾಡಲು ಭಾದ್ಯಸ್ಥರಲ್ಲ ಅಂದರೆ ಸರಿಯಲ್ಲ. ಪ್ರತಿವಾದಿಯು ದಾವಾ ಆಸ್ತಿಗೆ ಸಂಬಂಧಿಸಿದಂತೆ ನನ್ನೊಂದಿಗೆ ಯಾವುದೇ ಬಾಡಿಗೆ ಕರಾರನ್ನು ಮಾಡಿಕೊಂಡಿಲ್ಲ ಅಂದರೆ ಸರಿಯಲ್ಲ. ಹಾಗಾಗಿ ದಾವೆಯಲ್ಲಿ ಕೇಳಿರುವ ಪರಿಹಾರವನ್ನು ಪಡೆಯಲು ಅರ್ಹಳಲ್ಲ ಅಂದರೆ ಸರಿಯಲ್ಲ. ಪ್ರತಿವಾದಿಯ ಗಂಡ ದಾವಾ ಆಸ್ತಿಯನ್ನು ನಿವೇಶನವಾಗಿದ್ದಾಗ ಖರೀದಿ ಮಾಡಿ, ಮನೆ ನಿರ್ಮಿಸಿಕೊಂಡು ಅದಕ್ಕೆ ವಿದ್ಯುತ್ ಸಂಪರ್ಕ ಪಡೆದುಕೊಂಡಿರುತ್ತಾರೆ ಅಂದರೆ ಸರಿಯಲ್ಲ. ಪ್ರತಿವಾದಿ ವಿರುದ್ಧ ಸುಳ್ಳು ದಾವೆ ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರು ವಿಚಾರಣೆ: ಇರುವುದಿಲ್ಲ.**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ದೀಪು ಎಂ.ಟಿ.)
3 ನೇ.ಹೆ.ಪ್ರ:ದ:ನ್ಯಾ:ದಂ.,ರವರು, ಕಡೂರು.